## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕಲಬುರಗಿ ಜಿಲ್ಲೆ ಚಿತ್ತಾಪೂರ ಟೌನ್‌ನ ಮೆಟ್ರಿಕ್ ನಂತನರದ ಬಾಲಕಿಯರ ವಿದ್ಯಾರ್ಥಿ ನಿಲಯವನ್ನು (BCWD-2084) ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯವನ್ನಾಗಿ ಪರಿವರ್ತಿಸುವ ಕುರಿತು.

**ಓದಲಾಗಿದೆ:-** ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕನಿ/ವನಿಶಾ-3/ಸಿಆರ್-25/ 2021-22, ದಿನಾಂಕ:01.12.2022

**ಪ್ರಸ್ತಾವನೆ:-**

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರು ರವರು ಕಲಬುರಗಿ ಜಿಲ್ಲೆ ಚಿತ್ತಾಪುರ ಟೌನ್ನಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್-ನಂತರದ ಬಾಲಕಿಯರ ವಿದ್ಯಾರ್ಥಿನಿಲಯದ (ಬಿಸಿಡಬ್ಲ್ಯೂಡಿ 2084) ಪ್ರವೇಶಕ್ಕೆ ಕಳೆದ 04 ವರ್ಷಗಳಿಂದ ಹೆಚ್ಚಿನ ಪ್ರಮಾಣದಲ್ಲಿ ಅರ್ಜಿಗಳು ಸ್ವೀಕೃತವಾಗದ ಕಾರಣ ಬಾಲಕರ ವಿದ್ಯಾರ್ಥಿನಿಲಯಕ್ಕೆ ಹೆಚ್ಚಿನ ಬೇಡಿಕೆ ಇರುವುದರಿಂದ ಸದರಿ ಬಾಲಕಿಯರ ವಿದ್ಯಾರ್ಥಿನಿಲಯವನ್ನು ಬಾಲಕರ ವಿದ್ಯಾರ್ಥಿನಿಲಯವನ್ನಾಗಿ ಪರಿವರ್ತಿಸಲು ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಕಲಬುರಗಿ ಇವರು ಕೋರಿರುತ್ತಾರೆ. ಕಲಬುರಗಿ ಜಿಲ್ಲೆ ಚಿತ್ತಾಪುರ ಟೌನ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್-ನಂತರದ ಬಾಲಕಿಯ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಕಡಿಮೆ ಅರ್ಜಿಗಳು ಸ್ವೀಕೃತವಾಗಿರುವುದಲ್ಲದೆ. ಚಿತ್ತಾಪೂರ ಟೌನ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ 07 ಸಂಯುಕ್ತ ಕಿರಿಯ ಕಾಲೇಜುಗಳಿಗೆ 5 ಕಿ.ಮೀ ದೂರದಿಂದ 960 ವಿದ್ಯಾರ್ಥಿಗಳು ವ್ಯಾಸಂಗಕ್ಕಾಗಿ ಬರುತ್ತಿದ್ದು, ಈ ಭಾಗದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಉನ್ನತ ವಿದ್ಯಾಭ್ಯಾಸಕ್ಕೆ ಸಹಕಾರಿಯಾಗುವುದಾಗಿಯೂ ಈ ವಿದ್ಯಾರ್ಥಿಗಳಿಂದ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಹೆಚ್ಚಿನ ಬೇಡಿಕೆ ಇರುವುದರಿಂದ ಮೆಟ್ರಿಕ್-ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಚಿತ್ತಾಪುರ ಟೌನ್‌ನ ಈ ನಿಲಯವನ್ನು ಮೆಟ್ರಿಕ್-ನಂತರದ ಬಾಲಕರ ವಿದ್ಯಾರ್ಥಿನಿಲಯವನ್ನಾಗಿ ಪರಿವರ್ತಿಸಲು ಅವಶ್ಯಕತೆ ಇರುತ್ತದೆ ಎಂದು ತಿಳಿಸಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲೂ 14 ಬಿಎಂಎಸ್ 2022**
**ಬೆಂಗಳೂರು, ದಿನಾಂಕ: 01-04-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕಲಬುರಗಿ ಜಿಲ್ಲೆ ಚಿತ್ತಾಪುರ ಟೌನ್ ನಲ್ಲಿರುವ ಮೆಟ್ರಿಕ್-ನಂತರದ ಬಾಲಕಿಯರ ವಿದ್ಯಾರ್ಥಿನಿಲಯದ (ಬಿಸಿಡಬ್ಲ್ಯೂಡಿ 2084) ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಈ ಕೆಳಕಂಡಂತೆ ಪರಿವರ್ತಿಸಿದ್ದು, ಈಗಾಗಲೇ ಸದರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಮಂಜೂರಾಗಿರುವ ಕಾವಲುಗಾರ ಹುದ್ದೆಯನ್ನು ಅಗತ್ಯತೆ ಇರುವ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಸ್ಥಳಾಂತರಗೊಳಿಸಿ ಆದೇಶಿಸಿದೆ.

| HIC NO | ಹಾಲಿ ಇರುವ ವಿದ್ಯಾರ್ಥಿನಿಲಯದ ವಿವರ | ಪರಿವರ್ತಿಸಿರುವ ವಿದ್ಯಾರ್ಥಿನಿಲಯದ ವಿವರ |
|---|---|---|
| BCWD 2084 | ಮೆಟ್ರಿಕ್-ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಚಿತ್ತಾಪುರ ಟೌನ್ ಕಲಬುರಗಿ ಜಿಲ್ಲೆ | ಮೆಟ್ರಿಕ್-ನಂತರದ ಬಾಲಕರ ವಿದ್ಯಾರ್ಥಿನಿಲಯ, ಚಿತ್ತಾಪುರ ಟೌನ್ ಕಲಬುರಗಿ ಜಿಲ್ಲೆ |

....2

01/04/2022

ಈಗಾಗಲೇ ಸದರಿ ಮೆಟ್ರಿಕ್-ನಂತರದ ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ಮಂಜೂರಾಗಿರುವ ಕಾವಲುಗಾರ ಹುದ್ದೆಯನ್ನು ಅಗತ್ಯತೆ ಇರುವ ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ಸ್ಥಳಾಂತರಗೊಳಿಸಲು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಕೂಡಲೇ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆಯನ್ನು ಕಳುಹಿಸುವುದು.

ಈ ಆದೇಶವನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

Shaheenparveen 01/04/2022

**(ಷಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

01/4

**ಇವರಿಗೆ:**

1. ಪ್ರಧಾನ ಮಹಾಲೇಖಪಾಲಕರು, (ಎ ಮತ್ತು ಇ) (ಲೆಕ್ಕಪರಿಶೋಧನೆ-12), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಕಲಬುರಗಿ ಜಿಲ್ಲೆ, ಕಲಬುರಗಿ.
4. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು, ಕಲಬುರಗಿ ಜಿಲ್ಲೆ, ಕಲಬುರಗಿ.
5. ರಾಜ್ಯ ಖಜಾನಾಧಿಕಾರಿಗಳು ಬೆಂಗಳೂರು.

**ಪ್ರತಿ : -**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ.
2. ಸರ್ಕಾರದ ಉಪ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**********